ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತಾ ಯೋಜನೆಗಳ ಬಗ್ಗೆ

ಶ್ರೀ ಬಿ. ಕೆ. ಹರಿಪ್ರಸಾದ್(ವಿಧಾನ ಸಭೆಯಿಂದ ಚುನಾಯಿತರಾದವರು) -

37 (141) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಳೆದ ಎರಡು ವರ್ಷಗಳಿಂದ ಈವರೆವಿಗೂ ಬೆಂಗಳೂರು ನಗರ/ಬೆಂಗಳೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಯೋಜನೆಗಳ ಲಾಭ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ಹೆಸರು, ಯೋಜನೆಗಳ ಪ್ರತ್ಯೇಕ ವಿವರ ನೀಡುವುದು)

(ಆ) ಬೆಂಗಳೂರು ನಗರ/ಬೆಂಗಳೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಕೈಗಾರಿಕಾ ತರಬೇತಿ ಕೇಂದ್ರಗಳಿವೆ; (ವಿವರ ನೀಡುವುದು)

(ಇ) ನಿರುದ್ಯೋಗ ನಿವಾರಣೆಯ ನಿಟ್ಟಿನಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಯೋಜನೆಗಳಾವುವು; ಹೊಸ ಕೈಗಾರಿಕಾ ತರಬೇತಿ ಕೇಂದ್ರ ಸ್ಥಾಪಿಸಲು ಸರ್ಕಾರದ ಕ್ರಮವೇನು?